ನಿಯಮ-72
ಕ್ರ-10 ಕಂಪ್ಯೂಟರ್

<u>ಕರ್ನಾಟಕ ವಿಧಾನ ಪರಿಷತ್ತು</u>

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.**

**ಪ್ರಶ್ನೆ:**

ಸಮಾಜ ಕಲ್ಯಾಣ ಇಲಾಖೆಯಡಿಯ ಕ್ರೈಸ್ ವತಿಯಿಂದ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ನವೋದಯದ ಮಾದರಿಯಲ್ಲಿ ಶೇ 10 ರಷ್ಟು ವಿಶೇಷ ಭತ್ಯೆ ಪಾವತಿಸದೆ ಇರುವುದು, ವಸತಿ ಶಾಲೆಗಳಲ್ಲಿ ಪಿ.ಯು.ಸಿ ತರಗತಿಗಳನ್ನು ಪ್ರಾರಂಭಿಸದೆ ಇರುವುದು, ಹೋಬಳಿಗೊಂದು ವಸತಿ ಶಾಲೆ ಪ್ರಾರಂಭ, ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಸೃಜಿಸದೆ ಇರುವುದು, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಸ್ನಾತಕೋತ್ತರ ಪದವೀಧರರ ಹುದ್ದೆಗಳನ್ನು ಸೃಜಿಸದೆ ಇರುವುದು, ವಸತಿ ಶಾಲೆಗಳ ಉನ್ನತೀಕರಿಸದೆ ಇರುವುದು, ಹಿಂದಿ ಉಪನ್ಯಾಸಕರ ಹುದ್ದೆ ಸೃಜಿಸದೆ ಇರುವುದು ಮುಂತಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನಸೆಳೆಯ ಬಯಸುತ್ತೇನೆ.

**ಉತ್ತರ:**

**ನವೋದಯದ ಮಾದರಿಯಲ್ಲಿ ಶೇ 10 ರಷ್ಟು ವಿಶೇಷ ಭತ್ಯೆ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 830 ವಸತಿ ಶಾಲೆ/ ಕಾಲೇಜುಗಳು (ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 830 ವಸತಿ ಶಾಲೆ/ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದವರ್ಗ-171) ಕಾರ್ಯನಿರ್ವಹಿಸುತ್ತಿವೆ.

ಸದರಿ ವಸತಿ ಶಾಲೆಗಳಲ್ಲಿ ಒಟ್ಟು 19094 ಬೋಧಕ/ ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 5821 ಖಾಯಂ ಬೋಧಕ/ ಬೋಧಕೇತರ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳಿಗೆ ಮೂಲ ವೇತನದ ಶೇ 10 ಶಾಲಾ ಕ್ಯಾಂಪಸ್ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಗೆ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯು 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿದೆ.

**ವಸತಿ ಶಾಲೆಗಳಲ್ಲಿ ಪಿ.ಯು.ಸಿ ತರಗತಿಗಳು:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 26 ಪದವಿ ಪೂರ್ವ ಕಾಲೇಜುಗಳು, 14 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು, 12 ಏಕಲವ್ಯ ವಸತಿ ಶಾಲೆಗಳು ಹಾಗೂ 30 ಉನ್ನತೀಕರಿಸಿದ ವಸತಿ ಶಾಲೆಗಳಲ್ಲಿ ಪಿ.ಯು.ಸಿ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಉಳಿದಂತೆ, 114 ಪ.ಜಾತಿ ಮತ್ತು ಪ.ವರ್ಗದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು 06 ರಿಂದ 12 ನೇ ತರಗತಿಯವರೆಗೆ ಪ್ರಾರಂಭಿಸಲು ಅನುಮತಿ ನೀಡಲಾಗಿರುತ್ತದೆ. ಸದರಿ ಶಾಲೆಗಳಿಗೆ 06 ರಿಂದ 10 ನೇ ತರಗತಿಯವರೆಗೆ ಮಾತ್ರ ಬೋಧಕ/ ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ.

ಸದರಿ 114 ವಸತಿ ಶಾಲೆಗಳಲ್ಲಿ ಸರ್ಕಾರದ ಆದೇಶದಂತೆ 11 ಮತ್ತು 12 ನೇ ತರಗತಿಗಳನ್ನು ಪ್ರಾರಂಭಿಸಲು ಮತ್ತು ಅವಶ್ಯಕ ಹುದ್ದೆಗಳನ್ನು ಮಂಜೂರು ಮಾಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿ, ಆರ್ಥಿಕ ಇಲಾಖೆಯು ಹುದ್ದೆಗಳ ಸೃಜನೆಗೆ ಸಹಮತಿಸಿದ್ದಲ್ಲಿ ಬೃಹತ್ ಮೊತ್ತದ ಹೆಚ್ಚುವರಿ ಹೊಣೆಯಾಗುವುದರಿಂದ ರಾಜ್ಯದ ಪ್ರಸ್ತುತ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಪ್ರಸ್ತಾವನೆಯನ್ನು ಸದ್ಯಕ್ಕೆ ಮುಂದೂಡುವಂತೆ ತಿಳಿಸಿರುತ್ತದೆ.

**ಹೋಬಳಿಗೊಂದು ವಸತಿ ಶಾಲೆ:**

ಕರ್ನಾಟಕ ರಾಜ್ಯಾದ್ಯಂತ ಒಟ್ಟು 747 ಹೋಬಳಿಗಳು ಇದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 830 ವಸತಿ ಶಾಲೆ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಕರ್ನಾಟಕ ರಾಜ್ಯಾದಲ್ಲಿರುವ ಹೋಬಳಿಗಳ ಸಂಖ್ಯೆಗೆ ಹೋಲಿಸಿದಾಗ ಹೋಬಳಿಗಳ ಸಂಖ್ಯೆಗಿಂತ ವಸತಿ ಶಾಲೆಗಳ ಸಂಖ್ಯೆ ಹೆಚ್ಚಾಗಿರುತ್ತವೆ.

**ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 804 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 802 ವಸತಿ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 546 ಖಾಯಂ ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ.

**ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಸ್ನಾತಕೋತ್ತರ ಪದವೀಧರರ ಹುದ್ದೆ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 14 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು 06 ರಿಂದ 12 ತರಗತಿಯವರೆಗೆ ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆಗಳಲ್ಲಿ ಪ್ರತಿ ವಿಷಯಕ್ಕೆ 02 ಸ್ನಾತಕೋತ್ತರ ಪದವೀಧರ ಶಿಕ್ಷಕರ ಹುದ್ದೆಗಳು ಮಂಜೂರಾಗಿರುತ್ತವೆ.

**ಹಿಂದಿ ಉಪನ್ಯಾಸಕರ ಹುದ್ದೆ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಕಾಲೇಜುಗಳು PCMB & PCMC ಸಂಯೋಜನೆಗಳೊಂದಿಗೆ ನಡೆಸಲಾಗುತ್ತಿದ್ದು, ಸದರಿ ವಸತಿ ಕಾಲೇಜುಗಳು ಆಂಗ್ಲ ಮಾಧ್ಯಮ ವಿಜ್ಞಾನ ಕಾಲೇಜುಗಳಾಗಿದ್ದು, ಪ್ರಸ್ತುತ ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳನ್ನು ಭೋದಿಸಲು ಕ್ರಮವಹಿಸಲಾಗಿದೆ. ಹಿಂದಿ ಉಪನ್ಯಾಸಕರ ಹುದ್ದೆ ಸೃಜನೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

**ಸಕಇ 464 ಎಂಡಿಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು